ನೆಡುತೋಪು ನಿರ್ಮಾಣಕ್ಕಾಗಿ ವಶಪಡಿಸಿಕೊಂಡಿರುವುದಿಲ್ಲ. ಆದ್ದರಿಂದ ಹಿಂದಿರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಅಂತರಾಷ್ಟ್ರೀಯ ಕ್ರೀಡಾಂಗಣವನ್ನಾಗಿ ಪರಿವರ್ತಿಸುವುದು

24 (133) ಶ್ರೀ ಕೋಳಿವಾಡ ಕೆ.ಬಿ. (ರಾಣೆಬೆನ್ನೂರು) :– ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

(ಅ) ರಾಣೆಬೆನ್ನೂರು ನಗರದ ಕ್ರೀಡಾಂಗಣವನ್ನು ಅಂತರಾಷ್ಟ್ರೀಯ ಮಾದರಿ ಕ್ರೀಡಾಂಗಣವಾಗಿ ಪರಿವರ್ತಿಸಲು ಈಗಾಗಲೇ ಲೋಕೋಪಯೋಗಿ ಇಲಾಖೆಯಲ್ಲಿ ರೂ. ಮೂರು ಕೋಟಿ ಅನುದಾನವಿದ್ದು, ಆಡಳಿತಾತ್ಮಕ ಮಂಜೂರಾತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದಕ್ಕೆ ಕಾರಣವೇನು ; ಯಾವಾಗ ಮಂಜೂರಾತಿ ನೀಡಲಾಗುವುದು ?

ಶ್ರೀ ಕೆ. ಅಭಯ ಚಂದ್ರ (ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು) :–

(ಅ) ಸರ್ಕಾರದ ಗಮನಕ್ಕೆ ಬಂದಿದೆ.

(ಆ) ಆದೇಶ ಸಂ:ಸಿವೈಎಸ್ಎಸ್/ಟಿಎಫ್ಸಿ/67/2006–07, ದಿನಾಂಕ:27–06–2013 ರಲ್ಲಿ ಹಾವೇರಿ ಜಿಲ್ಲೆ, ರಾಣೆಬೆನ್ನೂರು ತಾಲ್ಲೂಕು ಕ್ರೀಡಾಂಗಣದಲ್ಲಿ ಹಾಲಿ ಇರುವ ಪೆವಿಲಿಯನ್ ಬ್ಲಾಕ್‌ನ್ನು ಯಥಾ ಸ್ಥಿತಿಯಲ್ಲಿ ಉಳಿಸಿಕೊಂಡು ಹೆಚ್ಚುವರಿ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ನಿಯಮಗಳ ಅನುಸಾರ ನಿರ್ವಹಿಸುವುದು ಮತ್ತು ಈ ಕಾಮಗಾರಿಗಳಿಗೆ ತಗಲುವ ವೆಚ್ಚವನ್ನು ನಗರ ಸಭೆಯಿಂದಲೇ ಒದಗಿಸಲಾದ ಅನುದಾನದಿಂದ ವಿನಿಯೋಗಿಸಲು ಇಲಾಖೆಯಿಂದ ಅನುಮೋದನೆ ನೀಡಿರುತ್ತದೆ.

ಜವಳಿ ಪಾರ್ಕ್ ಪ್ರಾರಂಭಿಸುವುದು

25 (46) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ) :– ಮಾನ್ಯ ಜವಳಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

(ಅ) ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕಿನಲ್ಲಿ ಜವಳಿ ಪಾರ್ಕ್ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಜವಳಿ ಪಾರ್ಕ್ ಪ್ರಾರಂಭಿಸಲು ಸ್ಥಳ ಗುರುತಿಸಿ ಅದಕ್ಕೆ ತಗಲುವ ವೆಚ್ಚಕ್ಕೆ ಅನುದಾನ ಮೀಸಲಿರಿಸಿದೆಯೇ ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಜವಳಿ ಪಾರ್ಕ್‌ಗೆ ಪ್ರಾರಂಭಿಸುವುದರಿಂದ ಗಡಿಭಾಗದ ಹಿಂದುಳಿದ ತಾಲ್ಲೂಕಿನ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶಗಳು ಲಭಿಸುವುದಿಲ್ಲವೇ ? (ವಿವರ ನೀಡುವುದು)